# **ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**

## **ಸಿ.ಸಿ.117/2022**

| | | |
|---|---|---|
| ಸಾಕ್ಷಿದಾರರ ಹೆಸರು | : ವಸಂತ್ ಎ | ಪ್ರಾಸಾ-9 |
| ತಂದೆಯ ಹೆಸರು | : ಅಜಯ್ | ಚಾಸಾ-23 |
| ವಯಸ್ಸು | : 44 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಹೆಚ್.ಸಿ.35 | ದಿನಾಂಕಃ 30.04.2026. |
| ವಾಸಸ್ಥಳ | : ಆಲ್ದೂರು ಪೋಲಿಸ್ ಠಾಣೆ. | |

**:ಮುಖ್ಯ ವಿಚಾರಣೆ: ಪ್ರಾಜ್ಞ್ಯಾ ಸ.ಸ.ಅ. ರವರಿಂದ:**

ನಾನು ದಿ.15.03.2018 ರಿಂದ ದಿ.28.02.2023 ರವರೆಗೂ ಮೂಡಿಗೆರೆ ಪೋಲಿಸ್ ಠಾಣೆಯಲ್ಲಿ ಮುಖ್ಯ ಪೇದೆ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿ.08.02.2019 ರಂದು ನಾನು ಠಾಣಾ ಹಗಲು SHO ಕರ್ತವ್ಯದಲ್ಲಿರುವಾಗ ಸ.6.45 ರ ಸಮಯಕ್ಕೆ ಚಾಸಾ-1 ರವರು ಠಾಣೆಗೆ ಹಾಜರಾಗಿ ನೀಡಿದ್ದ ದೂರನ್ನು ಸ್ವೀಕರಿಸಿಕೊಂಡು, ಠಾಣಾ.ಮೊ.ನಂ.16/2019 ಕಲಂ 457 ಮತ್ತು 380 ರ ದಂಡ ಸಂಹಿತೆಯ ಪ್ರಕಾರ ಪ್ರಕರಣವನ್ನು ದಾಖಲಿಸಿಕೊಂಡಿರುತ್ತೇನೆ. ನಂತರ ಪ್ರಥಮ ವರ್ತಮಾನ ವರದಿಯನ್ನು ಚಾಸಾ-20 ರವರ ಮುಖೇನ ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ. ಪ್ರಸ್ತುತ ಪ್ರಕರಣವು ಘೋರ ಪ್ರಕರಣವಾದ ಕಾರಣ ಪ್ರಕರಣದ ಕಡತವನ್ನು ಚಾಸಾ-25 ರವರಿಗೆ ಹಸ್ತಾಂತರಿಸಿರುತ್ತೇನೆ. ದಿ.13.01.2022 ರಂದು ಚಾಸಾ-27 ರವರು ದಸ್ತಗಿರಿ ಮಾಡಿದ ಆರೋಪಿಗಳ ಸ್ವ ಇಚ್ಛಾ ಹೇಳಿಕೆಯನ್ನು ಪಡೆಯುವಾಗ ನಾನು ಅದನ್ನು ಟೈಪ್ ಮಾಡಿಕೊಂಡಿರುತ್ತೇನೆ. ದಿ.14.01.2022 ಮತ್ತು ದಿ.19.01.2022 ರಂದು ಸಾಕ್ಷಿದಾರರ ಹೇಳಿಕೆಯನ್ನು ಪಡೆಯುವ ಕಾಲಕ್ಕೆ ನಾನು ಅವರ ಹೇಳಿಕೆಯನ್ನು ಟೈಪ್ ಮಾಡಿಕೊಂಡಿರುತ್ತೇನೆ. ದಿ.13.01.2022, ದಿ.14.01.2022 ಮತ್ತು ದಿ.18.01.2022 ರಂದು ಚಾಸಾ-27 ರವರು ಅಮಾನತ್ ಮಹಜರ್ ಮಾಡಿದ ಕಾಲದಲ್ಲಿ ನಾನು ಫೋಟೋಗಳನ್ನು ತೆಗೆದು ಸಿಡಿ ಗೆ ವರ್ಗಾಯಿಸಿ ಕಲಂ 65 ಬಿ ರಡಿಯ ದೃಢೀಕೃತ ಪ್ರತಿಯನ್ನು ನೀಡಿರುತ್ತೇನೆ. ದಿ.27.01.2022 ರಂದು ವಾಹನ ಬಿಡುಗಡೆ ಮಾಡಿದ ಕಾಲಕ್ಕೆ ನಾನು ಮಹಜರ್ ನ್ನು ಬರೆದಿರುತ್ತೇನೆ.

ಸಾಕ್ಷಿಯು ನಿಪಿ-1 ಮತ್ತು 2 ರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-1(ಬಿ) ಮತ್ತು 2(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ದಿ.27.01.2022 ರಂದು ಬರವಣಿಗೆ ಮಾಡಿದ ಮಹಜರ್ ನಲ್ಲಿ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ಮಹಜರ್ ನ್ನು ನಿಪಿ-40 ಮತ್ತು ಸಾಕ್ಷಿಯ ಸಹಿಯನ್ನು ನಿಪಿ-40(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ನಿಪಿ-14 ಮತ್ತು 15 ರ ಆದೇಶದ ಮೇರೆಗೆ ಸಿಡಿಯನ್ನು ನಾಶಗೊಳಿಸಿದ ಬಗ್ಗೆ ನೀಡಿರುವ ನಿವೇದನೆಯಲ್ಲಿ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ನಿವೇದನೆಯನ್ನು ನಿಪಿ-41, ಸಾಕ್ಷಿಯ ಸಹಿಯನ್ನು ನಿಪಿ-41(ಎ) ಎಂದು ಗುರುತಿಸಲಾಯಿತು.

**<u>ಪಾಟೀ ಸವಾಲು: ಆರೋಪಿ ಪರ ಶ್ರೀ ಹೆಚ್.ಕೆ.ಡಿ. ವಕೀಲರಿಂದ:</u>**

ದಿ.08.02.2019 ರಂದು ಹಗಲು SHO ಕರ್ತವ್ಯ ಮಾಡುತ್ತಿದ್ದ ಬಾಬ್ತು ಯಾವುದೇ ದಾಖಲಾತಿಯನ್ನು ನೀಡಿರುವುದಿಲ್ಲ. ದಿ.13.02.2022 ರಂದು ಚಾಸಾ-1 ರವರು ಹೇಳಿದಂತೆ ಸಾಕ್ಷಿದಾರರ ಹೇಳಿಕೆಯನ್ನು ಟೈಪ್ ಮಾಡಿರುವುದಿಲ್ಲ ಸುಳ್ಳು ಎಂದರೆ ಸರಿಯಲ್ಲ. ಅದೇ ರೀತಿ ದಿ.14.02.2022 ರಿಂದ ದಿ.19.02.2022 ರವರಿಗೆ ಚಾಸಾ-1 ರವರು ಹೇಳಿದಂತೆ ಯಾವುದೇ ಸಾಕ್ಷಿದಾರರು ಹೇಳಿಕೆಯನ್ನು ಟೈಪ್ ಮಾಡಿರುವುದಿಲ್ಲ ಸುಳ್ಳು ಎಂದರೆ ಸರಿಯಲ್ಲ. ದಿ.18.01.2022 ರಂದು ಫೋಟೋವನ್ನು ಸಿಡಿಗೆ ವರ್ಗಾಯಿಸಿರುವುದಿಲ್ಲ ಎಂದರೆ ಸರಿಯಲ್ಲ. ದಿ.27.01.2022 ರಂದು ಮಹಜರ್ ಕ್ರಮವನ್ನು ಜರುಗಿಸಿರುವುದು ಸುಳ್ಳು ಎಂದರೆ ಸರಿಯಲ್ಲ. ಸದರಿ ಸಮಯದಲ್ಲಿ ತೆಗೆದ ಫೋಟೋಗಳನ್ನು ಈ ಪ್ರಕರಣಕ್ಕಾಗಿ ಸೃಷ್ಟಿಸಿರುತ್ತೇನೆ ಎಂದರೆ ಸರಿಯಲ್ಲ. ನಾನು ನನ್ನ ಮುಖ್ಯ ವಿಚಾರಣೆಯಲ್ಲಿ ತಿಳಿಸಿರುವ ಅಂಶಗಳು ಸುಳ್ಳಿನಿಂದ ಕೂಡಿರುತ್ತವೆ ಎಂದರೆ ಸರಿಯಲ್ಲ.

**<u>ಮರು ವಿಚಾರಣೆ ಇಲ್ಲ</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

C/c ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.